ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 04-03-2021 ಪ್ರಶ್ನೆ ಸಂಖ್ಯೆ : 578 (678)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 04-03-2021

ಉತ್ತರಿಸುವ ಸಚಿವರು: ಮಾನ್ಯ ಸಣ್ಣ ನೀರಾವರಿ ಸಚಿವರು

ವಿಷಯ : ಕೆರೆಗಳ ಹೂಳು ತೆಗೆಯುವ ಕಾಮಗಾರಿಯ ಬಗ್ಗೆ

(ಅ) ಕಳೆದ ಮೂರು ವರ್ಷಗಳಿಂದ ಸಣ್ಣ ನೀರಾವರಿ ಇಲಾಖೆಯ ವತಿಯಿಂದ ನಾಗಮಂಗಲ ತಾಲ್ಲೂಕಿಗೆ ಯಾವ ಯಾವ ಯೋಜನೆಯಲ್ಲಿ ಎಷ್ಟೆಷ್ಟು ಅನುದಾನ ಮಂಜೂರು ಮಾಡಲಾಗಿದೆ; (ಕಾಮಗಾರಿವಾರು ಅನುದಾನದ ಸಂಪೂರ್ಣ ವಿವರ ನೀಡುವುದು)

(ಆ) ನಾಗಮಂಗಲ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಕೆರೆಗಳ ಹೂಳು ತೆಗೆಯುವ ಹಾಗೂ ಕೆರೆಗಳಿಗೆ ನೀರು ತುಂಬಿಸುವ ಕಾಮಗಾರಿಗೆ ಅನುದಾನ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಇ) ಹಾಗಿದ್ದಲ್ಲಿ; ಅನುದಾನ ಮಂಜೂರು ಮಾಡುವುದು ಯಾವಾಗ; ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)